**ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಡಿ.ಎಸ್.ಅರುಣ್ ರವರು ನಿಯಮ 72ರ ಅಡಿಯಲ್ಲಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

**ಪ್ರಶ್ನೆ : ಆನ್‌ಲೈನ್ ಮೂಲಕ (ಡಿಜಿಟಲ್ ಮಾಧ್ಯಮ) ಆನ್‌ಲೈನ್ ಗೇಮಿಂಗ್‌ಗಳಾದ ಡ್ರೀಮ್ 11, ಮೈ 11 ಸರ್ಕಲ್ ಮುಂತಾದ ಆ್ಯಪ್‌ಗಳಿಂದ ಇದರಿಂದ ಆಗುತ್ತಿರುವ ಅನಾನುಕೂಲಗಳು ಹಾಗೂ ತೊಂದರೆಗಳ ಕುರಿತು ಮತ್ತು ಆನ್‌ಲೈನ್ ಮೂಲಕ ಸಾಲ ನೀಡಿ ಸಾರ್ವಜನಿಕರಿಗೆ ಮಾನಸಿಕ ಕಿರುಕುಳ ನೀಡುತ್ತಿರುವ ಆ್ಯಪ್‌ಗಳ ಬಗ್ಗೆ ಸಮಗ್ರವಾದ ತನಿಖೆ ಹಾಗೂ ಈ ಕೂಡಲೇ ಇಂತಹ ಚಟುವಟಿಕೆಗಳನ್ನು ರದ್ದುಪಡಿಸಲು ಕ್ರಮಕೈಗೊಳ್ಳುವ ಕುರಿತು.**

**ಉತ್ತರ: ಆನಲೈನ್ ಗೇಮ್‌ಗಳಾದ ಡ್ರೀಮ್-11, ಮೈ-11 ಸರ್ಕಲ್ ಮುಂತಾದ ಆ್ಯಪ್‌ಗಳಿಂದ ಆಗುತ್ತಿರುವ ಅನಾನೂಕೂಲಗಳು ಹಾಗೂ ತೊಂದರೆಗಳು.**

1. ಸಾರ್ವಜನಿಕರು ಅದರಲ್ಲೂ ವಿಶೇಷವಾಗಿ ಯುವ ಸಮುದಾಯದವರು ಆನಲೈನ್ ಗೇಮ್ ಆಡುವ ಹವ್ಯಾಸಿಗಳಾಗಿದ್ದು, ಇವರು ತಮ್ಮ ಉದ್ಯೋಗದ ಬಗ್ಗೆ ಹೆಚ್ಚು ಆಸಕ್ತಿಯನ್ನು ವಹಿಸದೆ ತಮ್ಮ ವೃತ್ತಿಯನ್ನು ದಕ್ಷತೆಯಿಂದ ಕಾರ್ಯ ನಿರ್ವಹಿಸದೇ ತಮ್ಮ ವೃತ್ತಿ ಜೀವನವನ್ನು ಹಾಳು ಮಾಡಿಕೊಳ್ಳುತ್ತಾರೆ. ಆ ಮೂಲಕ ಆರ್ಥಿಕ ನಷ್ಟ ಹೊಂದಿ ಮಾನಸಿಕ ತೊಂದರೆಗೊಳಗಾಗುತ್ತಿರುತ್ತಾರೆ.
2. ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರು ಆನಲೈನ್ ಗೇಮ್ ಆಡುವ ಹವ್ಯಾಸಿಗಳಾಗಿದ್ದು ಇವರು ತಮ್ಮ ಶಿಕ್ಷಣದ ಬಗ್ಗೆ ಆಸಕ್ತಿಯನ್ನು ವಹಿಸದೆ ತಮ್ಮ ವಿದ್ಯಾರ್ಥಿ ಜೀವನವನ್ನು ಹಾಳು ಮಾಡಿಕೊಳ್ಳುತ್ತಾರೆ. ಆ ಮೂಲಕ ಇವರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಸಾಧ್ಯತೆ ಇರುತ್ತದೆ ಎಂದು ತಿಳಿದುಬಂದಿರುತ್ತದೆ.

**ಲೋನ್ ಆ್ಯಪ್‌ಗಳಿಂದ ಸಾರ್ವಜನಿಕರಿಗೆ ಆಗುತ್ತಿರುವ ಮಾನಸಿಕ ತೊಂದರೆಗಳು ಹಾಗೂ ಈ ಬಗ್ಗೆ ಕೈಗೊಂಡ ತನಿಖೆ.**

1. ಆನ್‌ಲೈನ್ ಸಾಲ ಸೌಲಭ್ಯಕ್ಕೆ ಸಂಬಂಧಿಸಿದಂತೆ ಸಾರ್ವಜನಿಕರು ಅದರಲ್ಲೂ ವಿಶೇಷವಾಗಿ ಯುವ ಸಮುದಾಯ ಮೋಸಕ್ಕೆ ಒಳಗಾಗಿರುವುದು ಕಂಡು ಬಂದಿರುತ್ತದೆ. ಇವರು ಆರ್ಥಿಕ ನಷ್ಟಕ್ಕೆ ಒಳಗಾಗಿ ಮಾನಸಿಕ ತೊಂದರೆಗೊಳಗಾಗುತ್ತಿದ್ದಾರೆ.
2. ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಸಾರ್ವಜನಿಕರು / ಯುವ ಸಮುದಾಯ ವಂಚನೆಗೆ ಒಳಗಾಗದಂತೆ ಸೋಷಿಯಲ್ ಮಿಡಿಯಾಗಳ ಮೂಲಕ, ಮಾಧ್ಯಮಗಳ ಮೂಲಕ ಮತ್ತು ಪೊಲೀಸ್ ಇಲಾಖೆಯ ಮೂಲಕ ಸೈಬರ್ ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು ಇರುತ್ತದೆ.

**ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕೈಕೊಂಡಿರುವ ಕ್ರಮಗಳ ವಿವರಗಳು.**

- ಎಲ್ಲಾ ಪೊಲೀಸ್ ಠಾಣಾ ವ್ಯಾಪ್ತಿಗಳಲ್ಲಿ **'ಸೈಬರ್ ಕ್ರೈಂ ಜಾಗೃತಿ ದಿವಸ'** ಆಚರಣೆ ಮಾಡುತ್ತಿದ್ದು, ಈ ಕಾರ್ಯಕ್ರಮದಲ್ಲಿ ಸಾರ್ವಜನಿಕರಿಗೆ ಸೈಬರ್ ಅಪರಾಧ ತಡೆಗಟ್ಟುವ ಕುರಿತು ಜಾಗೃತಿ ಕಾರ್ಯಾಗಾರಗಳನ್ನು ಏರ್ಪಡಿಸಿ ವಂಚನೆಗೆ ಒಳಗಾದಂತೆ ಸಲಹಾ ಸೂಚನೆಗಳನ್ನು ನೀಡಲಾಗುತ್ತಿದೆ.
- ಸರ್ಕಾರದಿಂದ ನ್ಯಾಷನಲ್ ಸೈಬರ್ ಕ್ರೈಂ ರಿಪೋರ್ಟಿಂಗ್ ಪೋರ್ಟಲ್ ಪ್ರಾರಂಭಿಸಿದ್ದು, ಸಾರ್ವಜನಿಕರು ತಮಗೆ ವಂಚನೆಯಾದ ಬಗ್ಗೆ ಈ ಪೋರ್ಟಲ್ ಮುಖಾಂತರ ದೂರು ಸಲ್ಲಿಸಬಹುದಾಗಿದೆ.
- ಸರ್ಕಾರವು 1930 ಸಹಾಯವಾಣಿ ಸಂಖ್ಯೆಯನ್ನು ಪ್ರಾರಂಭಿಸಿದ್ದು, ಸಾರ್ವಜನಿಕರು 24*7 ತುರ್ತಾಗಿ ಹಣ ವಂಚನೆಯಾದ ಬಗ್ಗೆ ಮಾಹಿತಿಯನ್ನು ಒದಗಿಸಬಹುದಾಗಿದೆ.
- ಸೈಬರ್ ಅಪರಾಧಗಳಿಗೆ ಸಂಬಂಧಿಸಿದಂತೆ ಸಾರ್ವಜನಿಕರಲ್ಲಿ ತಿಳುವಳಿಕೆ ಮೂಡಿಸುವ ಸಲುವಾಗಿ ಭಿತ್ತಿ ಪತ್ರಗಳನ್ನು ಹಂಚಿದ್ದು ಅಲ್ಲದೇ ಧ್ವನಿವರ್ಧಕಗಳ ಮುಖಾಂತರ ಜಾಗೃತಿಯನ್ನು ಮೂಡಿಸಲಾಗುತ್ತಿದೆ.

- ಸೈಬರ್ ಅಪರಾಧಗೊಳಗಾದ ಜನರಿಂದ ದೂರು ತೆಗೆದುಕೊಂಡು ಪ್ರಕರಣವನ್ನು ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದು ಇರುತ್ತದೆ ಮತ್ತು ಅವರಲ್ಲಿ ಸೈಬರ ಅಪರಾಧಕ್ಕೆ ಸಂಬಂಧಿಸಿದಂತೆ ಜಾಗೃತಿ ವಹಿಸುವಂತೆ ತಿಳಿಸಿದ್ದು ಇರುತ್ತದೆ.
- ಸೈಬರ್ ಅಪರಾಧಗಳಿಗೆ ಸಂಬಂಧಿಸಿದಂತೆ ಕಾಲೇಜುಗಳಿಗೆ ಭೇಟಿ ನೀಡಿ ಶಿಕ್ಷಕರಿಗೆ ಹಾಗೂ ವಿದ್ಯಾರ್ಥಿಗಳಿಗೆ ಸೈಬರ ಅಪರಾಧಗಳ ಬಗ್ಗೆ ಹಾಗೂ ಆನ್‌ಲೈನ್‌ನಲ್ಲಿ ನಡೆಯುವ ವಂಚನೆ ಬಗ್ಗೆ ತಿಳುವಳಿಕೆ ಹೇಳಿದ್ದು ಮತ್ತು ಭಿತ್ತಿ ಪತ್ರಗಳನ್ನು ಹಂಚಿದ್ದು ಇರುತ್ತದೆ.
- ಸೈಬರ್ ಅಪರಾಧಗಳನ್ನು ಪತ್ತೆ ಮಾಡಲು ಮತ್ತು ತಡೆಗಟ್ಟಲು ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ತರಬೇತಿಯನ್ನು ನೀಡಿ ಪ್ರಕರಣಗಳನ್ನು ಸಕಾಲದಲ್ಲಿ ಪತ್ತೆ ಮಾಡುವಲ್ಲಿ ಕ್ರಮವಹಿಸಲಾಗಿರುತ್ತದೆ.
- ಆನ್‌ಲೈನ್ ಮೂಲಕ ಸಾಲ ನೀಡಿ ಸಾರ್ವಜನಿಕರಿಗೆ ವಂಚನೆ ಮಾಡುವ ಆ್ಯಪ್‌ಗಳ ಮೇಲೆ ನಿಗಾವಹಿಸಲು ಜಿಲ್ಲಾ ಮಟ್ಟದಲ್ಲಿ ಸಿಐಎನ್ ಪಿಎಸ್ ತೆರೆದಿದ್ದು, ಇದಕ್ಕೆ ಪಿ.ಐ ದರ್ಜೆ ಅಧಿಕಾರಿಯನ್ನು ನೇಮಿಸಲಾಗಿದೆ. ಈ ಕುರಿತು ಸಾರ್ವಜನಿಕರಿಗೆ ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ಕಾಲಕಾಲಕ್ಕೆ ಹಮ್ಮಿಕೊಳ್ಳಲಾಗುತ್ತಿರುತ್ತದೆ.
- ಆನ್‌ಲೈನ್ ಮೂಲಕ ಸಾಲ ನೀಡಿ ಸಾರ್ವಜನಿಕರಿಗೆ ಮಾನಸಿಕ ಕಿರುಕುಳ ನೀಡುತ್ತಿರುವ 42 ಬಗೆಯ ವಿವಿಧ ಆ್ಯಪ್‌ಗಳನ್ನು ಗೂಗಲ್ ಪ್ಲೇ ಸ್ಟೋರ್ ನಿಂದ ತೆಗೆದು ಹಾಕುವಂತೆ ಗೂಗಲ್ ಸರ್ವಿಸ್ ಪ್ರಾವೈಡರ್‌ಗೆ ಸಿಇಎನ್ ಪೊಲೀಸ್ ಠಾಣೆಯಿಂದ ಇ-ಮೇಲ್ ಸಂದೇಶವನ್ನು ರವಾನಿಸಲಾಗಿರುತ್ತದೆ. ಸದರಿ ಆ್ಯಪ್‌ಗಳನ್ನು ಗೂಗಲ್‌ನವರು ಡಿಲೀಟ್ ಮಾಡಿರುತ್ತಾರೆ.
- ಎಲ್ಲಾ ಠಾಣಾ ಸರಹದ್ದಿನಲ್ಲಿ ಪರಿಷ್ಕೃತ ಬೀಟ್ ಜಾರಿ ಕರ್ತವ್ಯಕ್ಕೆ ನೇಮಕವಾಗುತ್ತಿರುವ ಸಿಬ್ಬಂದಿಗಳ ಮೂಲಕ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ.
- ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸೈಬರ್ ಪೊಲೀಸ್ ಠಾಣೆ ಮೂಲಕ ಎಲ್ಲಾ ಸಾರ್ವಜನಿಕರಿಗೆ ಆನ್‌ಲೈನ್ ಮೂಲಕ ಸಾಲ ನೀಡುವ ವೆಬ್‌ಸೈಟ್‌ಗಳನ್ನಾಗಲಿ, ಆ್ಯಪ್‌ಗಳನ್ನಾಗಲಿ ಬಳಸದೇ ಎಚ್ಚರ ವಹಿಸಲು ಪ್ರಕಟಣೆಯನ್ನು ಸಹ ಮಾಡಲಾಗಿರುತ್ತದೆ.
- ಶಾಲಾ ಕಾಲೇಜುಗಳ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಭೇಟಿ ನೀಡುವ ಸಂದರ್ಭದಲ್ಲಿ ಇಂತಹ ಆನ್‌ಲೈನ್ ಗೇಮ್‌ಗಳ ಜಾಲಕ್ಕೆ ಸಿಲುಕದಂತೆ ಇರಲು ವಿಧ್ಯಾರ್ಥಿಗಳ ಗಮನಕ್ಕೂ ಸಹ ತರಲಾಗುತ್ತಿರುತ್ತದೆ.
- ಶಾಲಾ ಕಾಲೇಜುಗಳಿಗೆ ಭೇಟಿ ನೀಡಿ ನುರಿತ ಅಧಿಕಾರಿ & ಸಿಬ್ಬಂದಿಗಳಿಂದ ಕಾರ್ಯಕ್ರಮಗಳನ್ನು ಆಯೋಜಿಸಿ, ವಿಧ್ಯಾರ್ಥಿಗಳಲ್ಲಿ ಆನ್‌ಲೈನ್ ಗೇಮಿಂಗ್ ಹಾಗೂ ಆನ್‌ಲೈನ್ ಲೋನ್ ಆ್ಯಪ್‌ಗಳಿಂದಾಗುವ ಅನಾನುಕೂಲಗಳ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ.
- ಜಿಲ್ಲಾಗಳಲ್ಲಿ ಸೈಕಲ್ ಜಾಥಾ ನಡೆಸಿ, ಸರ್ವಜನಿಕರಲ್ಲಿ ಅರಿವು ಮೂಡಿಸಲಾಗುತ್ತಿದೆ.
- ಆನ್‌ಲೈನ್ (ಡಿಜಿಟಲ್ ಮಾಧ್ಯಮ) ವಂಚನೆ/ಕಿರುಕುಳ ಮುಂತಾದ ಅನಾನುಕೂಲಗಳ ಬಗ್ಗೆ ಕಿರುಚಿತ್ರ/ ಸಾಕ್ಷ್ಯ ಚಿತ್ರಗಳನ್ನು ಬಿಡುಗಡೆ ಮಾಡಲಾಗಿದೆ.
- ಆನ್‌ಲೈನ್ (ಡಿಜಿಟಲ್ ಮಾಧ್ಯಮ) ವಂಚನೆ/ಕಿರುಕುಳ ಮುಂತಾದ ಅನಾನುಕೂಲಗಳ ಬಗ್ಗೆ ಜಾಗೃತಿ ಗೀತೆಗಳನ್ನು ಸಂಯೋಜನೆ ಮಾಡಿ, ಅರಿವು ಮೂಡಿಸಲಾಗುತ್ತಿದೆ.

---

HD/23/PCQ/2023

(ಡಾ:ಜಿ.ಪರಮೇಶ್ವರ)
ಗೃಹ ಸಚಿವರು